ವಾರದಲ್ಲಿ ಕೊಡಿ ಎಂದು instruction ಕೊಡುತ್ತೇನೆ. ಎನ್‌ಆರ್‌ಇಜಿಎಸ್ ಗೆ ಸಂಬಂಧಪಟ್ಟಂತೆ ಸುಮಾರು 19 ಲಕ್ಷ ರೂಪಾಯಿ ನಿಮ್ಮ ತಾಲ್ಲೂಕಿನದ್ದು ಬಾಕಿ ಇದೆ. ಎನ್‌ಆರ್‌ಇಜಿಎಸ್ ನ ಹಣ ಕೇಂದ್ರ ಸರ್ಕಾರದಿಂದ ನಮಗೆ ಬರಬೇಕಾಗಿದೆ. ಹಣ ಬಿಡುಗಡೆ ಮಾಡುವುದಕ್ಕೆ ಆದಷ್ಟು ಒತ್ತಡವನ್ನು ಹಾಕುತ್ತಿದ್ದೇವೆ. ಆ ಹಣ ಬಂದ ತಕ್ಷಣ ನಾವು ಬಿಡುಗಡೆ ಮಾಡುತ್ತೇವೆ.

ಕೃಷಿಯೇತರ ಭೂಮಿಗಳ ನೋಂದಣಿಗೆ ಇ–ಸ್ವತ್ತು ಕಡ್ಡಾಯ

38(92) **ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಶಿರಸಿ)** :– ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಸರ್ಕಾರವು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿನ ಕೃಷಿಯೇತರ ಭೂಮಿಗಳ ನೋಂದಣಿಗೆ ಇ–ಸ್ವತ್ತು ಕಡ್ಡಾಯ ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು; ಇ–ಖಾತಾ ಮಾಡಿದ ಆಸ್ತಿಯನ್ನು ಮಾತ್ರ ನೋಂದಣಿ ಮಾಡಲು ಸರ್ಕಾರ ಉದ್ದೇಶಿಸಿದೆಯೇ ;

(ಆ) ಸದರಿ ಸ್ವತ್ತುಗಳ ನೋಂದಣಿಗೆ ಇ–ಖಾತಾ ಹಾಗೂ ಫಾರ್ಮ್–9 ತೆಗೆದುಕೊಂಡು ಹೋಗುವುದು ಕಡ್ಡಾಯವಾಗಿದೆಯೇ ;

(ಇ) ಇದರಿಂದಾಗಿ ಆಸ್ತಿ ನೋಂದಣಿ ಪ್ರಕ್ರಿಯೆಗೆ ಅಡಚಣೆ ಉಂಟಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಭೂ ಪರಿವರ್ತನೆಗೊಂಡಿದ್ದರೂ ಕೂಡ ನಕ್ಷೆ ನಮೂದಿಸಿಕೊಳ್ಳದವರ ಆಸ್ತಿ ಮಾರಾಟ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇಂತಹ ಆಸ್ತಿಗಳಿಗೆ ಇ–ಸ್ವತ್ತು ಪಡೆಯಲು ಅನುಸರಿಸಬೇಕಾದ ಕ್ರಮಗಳೇನು ; ಸರ್ಕಾರ ಇದಕ್ಕೆ ಕಾಲಮಿತಿಯೇನಾದರೂ ನಿಗದಿಪಡಿಸಿದೆಯೇ ? (ವಿವರ ನೀಡುವುದು)

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) (ಅ) ಹೌದು. ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂ.12278/2007 ರಲ್ಲಿ ಅನಧಿಕೃತ ಆಸ್ತಿಗಳ ನೋಂದಣಿಯನ್ನು ತಡೆಯಲು ವ್ಯಾಪಕವಾದ ಸಮಗ್ರ ನೀತಿಯನ್ನು ಜಾರಿಗೆ ತರುವುದಕ್ಕೆ ಕಂದಾಯ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಇಲಾಖೆಗೆ ಡಿಸೆಂಬರ್ 2012 ರಲ್ಲಿ ನಿರ್ದೇಶನ ನೀಡಿರುತ್ತದೆ. ಈ ಹಿನ್ನೆಲೆಯಲ್ಲಿ,

ಅನಧಿಕೃತ ಆಸ್ತಿಗಳ ನೊಂದಣಿ ತಡೆಗಟ್ಟಲು ರಾಜ್ಯದ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ 9, 11ಎ ಮತ್ತು 11ಬಿ ಗಳನ್ನು ದಿನಾಂಕ: 15-06-2013 ರಿಂದ ಇ-ಸ್ವತ್ತು ತಂತ್ರಾಂಶದ ಮೂಲಕ ಮಾತ್ರ ವಿತರಿಸುತ್ತಿವೆ.

ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ 1) ಗ್ರಾಮ ಠಾಣಾ ವ್ಯಾಪ್ತಿಯೊಳಗಿರುವ ಆಸ್ತಿ/ನಿವೇಶನ, 2) ವಸತಿ ಯೋಜನೆಯಡಿ ಸೃಜಿಸಿರುವ ಆಸ್ತಿ 3) ಭೂ ಪರಿವರ್ತನೆಯಾದ ವ್ಯವಸಾಯದ ಜಮೀನಿನಲ್ಲಿ ನಗರಾಭಿವೃದ್ಧಿ ಇಲಾಖೆಯು ಸಕ್ಷಮ ಯೋಜನಾ ಪ್ರಾಧಿಕಾರದಿಂದ ಬಡಾವಣೆ ನಕ್ಷೆ ಅನುಮೋದನೆಯೊಂದಿಗೆ ಸೃಜಿಸಲಾದ ಆಸ್ತಿಗಳು ಮತ್ತು 4) Single Plot Approval ನಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ಪಡೆದ ಆಸ್ತಿಗಳಿಗೂ ನಮೂನೆ-9, ನಮೂನೆ-11ಎ ಗಳನ್ನು ನೀಡಲಾಗುತ್ತಿದೆ.

ಕ್ರಮಬದ್ಧವಲ್ಲದ ಆಸ್ತಿಗಳಿಗೆ 1) ದಿನಾಂಕ: 14-06-2013 ಕ್ಕಿಂತ ಮುಂಚೆ 1,2 ಅಥವಾ 3 ಬಾರಿ ಮಾರಾಟ ಹಾಗೂ ಕ್ರಯಗಳಿಗೆ ಒಳಪಟ್ಟಿರುವ ನಿವೇಶನಗಳು, 2) ದಿನಾಂಕ: 14-06-2013 ಕ್ಕೆ ಮೊದಲು ಕಟ್ಟಡವಾಗಿದ್ದು, ಈ ದಿನಾಂಕಕ್ಕಿಂತ ಮುಂಚಿನ 6 ತಿಂಗಳ ಪೂರ್ವದ ಯಾವುದಾದರೂ ಒಂದು ತಿಂಗಳ ವಿದ್ಯುಚ್ಛಕ್ತಿ ಬಿಲ್‌ನ್ನು ಒದಗಿಸಿರುವ ಪ್ರಕರಣಗಳು, 3) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 95 (1) ರನ್ವಯ ಘಾರಂ ಬಿಲ್ಡಿಂಗ್ / ಹೌಸ್ ಎಂದು ಪರಿಗಣಿಸುವ ಆಸ್ತಿಗಳು ಮತ್ತು 4) ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ ಪ್ರಕರಣ 95 (2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-11ಬಿ ಅನ್ನು ಪಡೆದು ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಾಯಿಸಬಹುದಾಗಿದೆ.

ಇ- ಸ್ವತ್ತು ತಂತ್ರಾಂಶದ ಮೂಲಕ ವಿತರಿಸಿದ ನಮೂನೆ 9,11ಎ ಮತ್ತು 11ಬಿ ಗಳನ್ನು ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೋಂದಣಿ ಮಾಡಲು ಪರಿಗಣಿಸಲಾಗುತ್ತಿದೆ.

(ಆ) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಕ್ರಮಬದ್ಧ ಮತ್ತು ಕ್ರಮಬದ್ಧವಲ್ಲದ ಆಸ್ತಿಗಳಿಗೆ ಇ-ಸ್ವತ್ತು ತಂತ್ರಾಂಶದ ಮೂಲಕ ವಿತರಿಸಿದ ನಮೂನೆ 9, 11ಎ ಮತ್ತು 11 ಬಿ ಗಳನ್ನು ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಣಿ ಮಾಡಲು ತೆಗೆದುಕೊಂಡು ಹೋಗುವುದು ಕಡ್ಡಾಯವಾಗಿದೆ.

(ಇ) ಬಂದಿಲ್ಲ.

(ಈ) ಬಂದಿಲ್ಲ.

ಸ್ಥಳೀಯ ಯೋಜನಾ ಪ್ರಾಧಿಕಾರಗಳ ಹೊರಗಡೆ ಇರುವ ಪ್ರದೇಶಗಳಲ್ಲಿರುವ ಪ್ರಸ್ತುತ ಅಸ್ತಿತ್ವದಲ್ಲಿರುವ ಆಸ್ತಿಗಳಿಗೆ ಸಂಬಂಧಿಸಿದಂತೆ ಲೇಔಟ್ ಪ್ಲಾನ್‌ಗಳಿಗೆ ನಗರ ಯೋಜನಾ ನಿರ್ದೇಶನಾಲಯದ ಅನುಮೋದನೆಯ ದಾಖಲೆಯನ್ನು ಒದಗಿಸುವ ಅಗತ್ಯವಿರುವುದಿಲ್ಲ.

1,2 ಅಥವಾ 3 ಬಾರಿ ಮಾರಾಟ ಹಾಗೂ ಕ್ರಯಗಳಿಗೆ ಒಳಪಟ್ಟಿರುವ ಆದರೆ ಪಂಚತಂತ್ರ ತಂತ್ರಾಂಶದಲ್ಲಿ ನಿಗದಿತ ದಿನಾಂಕದೊಳಗೆ 14–06–2013 ರೊಳಗೆ ದಾಖಲಿಸದಿರುವ ಆಸ್ತಿಗಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಭೂ ಪರಿವರ್ತನೆಗೊಂಡಿದ್ದು, ಲೇಔಟ್ ಪ್ಲಾನ್ ಅನುಮೋದನೆಯಾಗದಿದ್ದರೂ ನಮೂನೆ 11ಬಿ ಯನ್ನು ನೀಡಿ ಉಪನೊಂದಣಾಧಿಕಾರಿಗಳ ಕಛೇರಿಯಲ್ಲಿ ನೊಂದಾಯಿಸಲು ಅವಕಾಶ ಕಲ್ಪಿಸಲಾಗಿದೆ.
(ಉ) ಇ–ಸ್ವತ್ತು ಪ್ರಕ್ರಿಯೆಯಲ್ಲಿ ಸಾರ್ವಜನಿಕರು ನಮೂನೆ ನಮೂನೆ–9, 11ಎ ಮತ್ತು 11ಬಿ ನ್ನು ಪಡೆಯಲು ಗ್ರಾಮ ಪಂಚಾಯತಿಗಳಿಗೆ ಅರ್ಜಿ ಸಲ್ಲಿಸುವ ಎಲ್ಲರಿಗೂ ನಮೂನೆಗಳನ್ನು ವಿತರಿಸುವ ಕಾರ್ಯವನ್ನು ಕೈಗೊಂಡಿದೆ. ಇ– ಸ್ವತ್ತು ತಂತ್ರಾಂಶದಿಂದ ಆನ್ ಲೈನ್ ಮೂಲಕ ಡಿಜಿಟಲ್ ಸಿಗ್ನೇಚರ್ ನೊಂದಿಗೆ ನಮೂನೆ 9,11ಎ ಮತ್ತು ನಮೂನೆ–11ಬಿ ನ್ನು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನೀಡುತ್ತಾರೆ. ಇದನ್ನು 45 ದಿನಗಳೊಳಗಾಗಿ ಅರ್ಜಿದಾರರು ನಿಯಮಗಳ ಪ್ರಕಾರ ಎಲ್ಲಾ ದಾಖಲಾತಿಗಳನ್ನು ಒದಗಿಸಿದಲ್ಲಿ ನೀಡಲಾಗುತ್ತದೆ.

ಶ್ರೀ ಹೆಚ್.ಕೆ. ಪಾಟೀಲ್ : ಮಾನ್ಯ ವಿಶ್ವೇಶ್ವರ ಹೆಗಡೆ ಕಾಗೇರಿಯವರೇ, ಈಗ ಕೊಟ್ಟಿರುವ ಉತ್ತರದಲ್ಲಿ ನಿಮಗೆ ಪೂರ್ಣ ಸಮಾಧಾನ ತಂದಿಲ್ಲವೆಂದು ನಾನು ಭಾವಿಸುತ್ತೇನೆ. ಇದರಲ್ಲಿ ಕೆಲವು ಬದಲಾವಣೆ ಆಗಬೇಕಾಗುತ್ತದೆ. ಅಂದರೆ, ಇದರಲ್ಲಿ ಕೆಲವು ಮಾಹಿತಿಗಳು ಸೇರಬೇಕಾಗುತ್ತದೆ. ಇತ್ತೀಚೆಗೆ ಒಂದು ಟೀಂ ಅನ್ನು ನಿಮ್ಮ ಜಿಲ್ಲೆಗೆ ಕಳುಹಿಸಿಕೊಟ್ಟಿದ್ದೆ. ಆ ಎಲ್ಲ ಮಾಹಿತಿ ಸೇರಿಸಿ ಎರಡು ದಿವಸಗಳಲ್ಲಿ ನಾನು ಮತ್ತೊಮ್ಮೆ ಉತ್ತರ ಕೊಡುತ್ತೇನೆ.

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಹೇಳಿರುವುದು ಒಳ್ಳೆಯದಾಗಿದೆ. ಉಳಿದೆಲ್ಲ ಮಾಹಿತಿ ಜೊತೆಗೆ ಪ್ರತ್ಯೇಕ ಉತ್ತರವನ್ನು ಕೊಡುತ್ತೇನೆಂದು ಹೇಳಿರುವುದು ಸ್ವಾಗತಾರ್ಹವಾದಂಥದು. ಆದರೆ, ಇದರಿಂದ ಆಗತಕ್ಕಂತಹ ತೊಂದರೆಗಳ ಬಗ್ಗೆ ಹೇಳುವುದಾದರೆ,...

ಅಧ್ಯಕ್ಷರು : ಈ ವಿಷಯವನ್ನು ಆಮೇಲೆ ನೋಡೋಣ. ಈಗ ಬೇಡ. ಈ ಪ್ರಶ್ನೆಯನ್ನು ಮುಂದಕ್ಕೆ ಹಾಕಿದ್ದೇನೆ.

ಪದವಿ ಕಾಲೇಜುಗಳ ಹೊಸ ಕಟ್ಟಡಗಳು

39(333) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಹೊಸ ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ ;

(ಆ) ಮಂಜೂರಾದ ಕಾಲೇಜುಗಳಿಗೆ ಹೊಸ ಕಟ್ಟಡ ನಿರ್ಮಿಸಲು ಎಷ್ಟು ಅನುದಾನ ಮಂಜೂರಾಗಿದೆ ; (ವಿವರ ನೀಡುವುದು)

(ಇ) ಹೊಸ ಕಟ್ಟಡಗಳ ಕಾಮಗಾರಿಗಳು ಯಾವ ಹಂತದಲ್ಲಿವೆ ; ನಿರ್ಮಾಣ ಕಾಮಗಾರಿಯು ತುಂಬಾ ನಿಧಾನಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ನಿಗದಿತ ಸಮಯದಲ್ಲಿ ಕಟ್ಟಡಗಳ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು) :–

(ಅ) 52 ಹೊಸ ಸರ್ಕಾರಿ ಪದವಿ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ ಹಾಗೂ 02 ಖಾಸಗಿ ಅನುದಾನಿತ ಕಾಲೇಜುಗಳನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಗಿದೆ.

(ಆ) ತುಮಕೂರು ಪದವಿ ಕಾಲೇಜಿಗೆ ರೂ. 350.00 ಲಕ್ಷ ವೆಚ್ಚದಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಮತ್ತು ರೂ. 60.00 ಲಕ್ಷ ವೆಚ್ಚದಲ್ಲಿ ಪ್ರಯೋಗಾಲಯ ನಿರ್ಮಾಣ ಮಾಡಲು ಅನುದಾನ ಮಂಜೂರಾಗಿದೆ. ತಿಳುವಳ್ಳಿ ಕಾಲೇಜಿಗೆ ರೂ. 200.00 ಲಕ್ಷ ವೆಚ್ಚದಲ್ಲಿ ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಮಂಜೂರಾಗಿದೆ. ಸೋಮವಾರಪೇಟೆ